ಶನಿವಾರ, 29 ಅಕ್ಟೋಬರ್ 2022, ಮಂಗಳೂರು

# ‘ಕೋಟಿ ಕಂಠ’ಗಳಲ್ಲಿ ಅನುರಣಿಸಿತು ಕನ್ನಡ

## ಕರಾವಳಿ ಅಭಿವೃದ್ಧಿ ಪ್ರಾಧಿಕಾರ, ಸುರತ್ಕಲ್ ಎನ್‌ಐಟಿಕೆ, ತೆಂಕಿಲ ವಿವೇಕಾನಂದ ಕ್ರೀಡಾಂಗಣದಲ್ಲಿ ಗಾಯನ





ಕನ್ನಡ ರಾಜ್ಯೋತ್ಸವದ ಅಂಗವಾಗಿ ಕರಾವಳಿ ಅಭಿವೃದ್ಧಿ ಪ್ರಾಧಿಕಾರ (ಚಿತ್ರ-1) ಮತ್ತು ಸುರತ್ಕಲ್‌ನ ಎನ್‌ಐಟಿಕೆ (ಚಿತ್ರ-2) ಹಾಗೂ ಪುತ್ತೂರಿನ ತೆಂಕಿಲ ವಿವೇಕಾನಂದ ಕ್ರೀಡಾಂಗಣ (ಚಿತ್ರ-3)ದಲ್ಲಿ ಕೋಟಿ ಕಂಠ ಗಾಯನ ಕಾರ್ಯಕ್ರಮವು ನಡೆಯಿತು.

**ಮಂಗಳೂರು/ಪುತ್ತೂರು:** ಕನ್ನಡ ರಾಜ್ಯೋತ್ಸವದ ಅಂಗವಾಗಿ ರಾಜ್ಯ ಸರ್ಕಾರ ಹಮ್ಮಿಕೊಂಡಿರುವ ಕೋಟಿ ಕಂಠ ಗಾಯನ ಕಾರ್ಯಕ್ರಮವು ಕರಾವಳಿ ಅಭಿವೃದ್ಧಿ ಪ್ರಾಧಿಕಾರ ಮಂಗಳೂರು ಹಾಗೂ ಸುರತ್ಕಲ್‌ನ ಎನ್‌ಐಟಿಕೆ ಮತ್ತು ಪುತ್ತೂರಿನ ತೆಂಕಿಲ ವಿವೇಕಾನಂದ ಕ್ರೀಡಾಂಗಣದಲ್ಲಿ ನಡೆಯಿತು.

ಕರಾವಳಿ ಅಭಿವೃದ್ಧಿ ಪ್ರಾಧಿಕಾರ ಮಂಗಳೂರು ವತಿಯಿಂದ ಮಂಗಳೂರು ದಕ್ಕೆ ಬಳಿ ನೇತ್ರಾವತಿ-ಫಲ್ಗುಣಿ ನದಿಗಳ ಸಂಗಮ ಸ್ಥಳದಲ್ಲಿ ಕ್ರೂಸ್‌ನಲ್ಲಿ ಕೋಟಿ ಕಂಠ ಗಾಯನ ಕಾರ್ಯಕ್ರಮ ಶುಕ್ರವಾರ ವಿಶಿಷ್ಟವಾಗಿ ನೆರವೇರಿತು.

67ನೇ ವರ್ಷದ ಕನ್ನಡ ರಾಜ್ಯೋತ್ಸವ ಅಂಗವಾಗಿ ಚಲಿಸುತ್ತಿರುವ ವಿಹಾರ ನೌಕೆಯಲ್ಲಿ ಗಾಯಕರು ನಾಡಗೀತೆ ಸಹಿತ ಕನ್ನಡ ಹಾಡುಗಳನ್ನು ಪ್ರಸ್ತುತ ಪಡಿಸಿದರು. ಸಮುದ್ರದ ಅಲೆಗಳ ಕಲರವದ ಜತೆಗೆ ಕನ್ನಡದ ಗೀತೆಗಳ ಗಾಯನ ವಿಶಿಷ್ಟ ಸನ್ನಿವೇಶ ಸೃಷ್ಟಿಸಿತು.

ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಕರಾವಳಿ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಮಟ್ಟಾರು ರತ್ನಾಕರ ಹೆಗ್ಡೆ ರಾಜ್ಯ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ವಿನಂತಿಯಂತೆ ಕರಾವಳಿ ಅಭಿವೃದ್ಧಿ ಪ್ರಾಧಿಕಾರದಿಂದ ಕೋಟಿ ಕಂಠ ಗಾಯನ ಕಾರ್ಯಕ್ರಮ ಆಯೋಜಿಸಲಾಗಿದೆ. ವಿಶಿಷ್ಟ ಕಾರ್ಯಕ್ರಮಗಳ ಮೂಲಕ ಪ್ರಧಾನಿ ನರೇಂದ್ರ ಮೋದಿ ಅವರ ಗಮನ ಸೆಳೆದಿರುವ ಸಚಿವ ಸುನಿಲ್ ಕುಮಾರ್ ಅವರ ನಿರ್ದೇಶನದಂತೆ ಪ್ರಾಧಿಕಾರದಿಂದ ವಿಶೇಷವಾಗಿ ಕಾರ್ಯಕ್ರಮ ಸಂಯೋಜಿಸಲಾಗಿದೆ. ನದಿಗಳು ಸಂಗಮಗೊಂಡು ಸಮುದ್ರ ಸೇರುವ ಪುಣ್ಯ ತಾಣದಲ್ಲಿ ಕ್ರೂಸ್‌ನಲ್ಲಿ ಕನ್ನಡ ಗೀತೆಗಳನ್ನು ಮೊಳಗಿಸಲಾಗುತ್ತಿದೆ. ಕನ್ನಡದ ಕೆಚ್ಚು ನಮ್ಮೆಲ್ಲರಲ್ಲಿ ಹೆಚ್ಚಲಿ. ಕನ್ನಡ ಭಾಷೆ, ಸಂಸ್ಕೃತಿಯನ್ನು ಉಳಿಸಿ ಬೆಳೆಸುವ ಕಾಯಕವನ್ನು ನಾವೆಲ್ಲರೂ ಜತೆಸೇರಿ ನಿರ್ವಹಿಸೋಣ ಎಂದರು.

ಅತಿಥಿಗಳಾಗಿದ್ದ ಎಎಸ್‌ಜಿಇಎಸ್ ಕಂಪೆನಿ (ಎಸ್‌ಇಜೆಡ್) ಜನರಲ್ ಮ್ಯಾನೇಜರ್ ಅಶೋಕ್ ಕುಮಾರ್ ಶೆಟ್ಟಿ, ದ.ಕ. ಸರಕಾರಿ ನೌಕರರ ಸಹಕಾರ ಬ್ಯಾಂಕ್ ಅಧ್ಯಕ್ಷ ಪ್ರಕಾಶ್ ನಾಯಕ್ ಶುಭ ಹಾರೈಸಿದರು. ಗಾಯಕರಾದ ಸೌಮ್ಯ ಭಟ್ ಕಟೀಲು, ರಾಕೇಶ್ ಡಿಸೋಜ, ಬಾಲಕೃಷ್ಣ ನೆಟ್ಟಾರು, ಶಮೀರ್ ಮುಲ್ಕಿ, ದೀಪ್ತಿ ಡಿಸೋಜ ಅವರ ತಂಡ ಕನ್ನಡದ ರಚನೆಗಳನ್ನು ಎರಡೂವರೆ ಗಂಟೆಗಳ ಕಾಲ ಸುಶ್ರಾವ್ಯವಾಗಿ ಹಾಡಿದರು.

ಕರಾವಳಿ ಅಭಿವೃದ್ಧಿ ಪ್ರಾಧಿಕಾರದ ಕಾರ್ಯದರ್ಶಿ ಪ್ರದೀಪ್ ಡಿಸೋಜ ಸ್ವಾಗತಿಸಿದರು. ವಲಯ ಅಧಿಕಾರಿ ಜನಾರ್ದನ್ ವಂದಿಸಿದರು. ಮೋಹಿತ್ ಕಾರ್ಯಕ್ರಮ ನಿರೂಪಿಸಿದರು.

### ನದಿಯಲ್ಲಿ ವಿಹಾರನೌಕೆ

ಮಂಗಳೂರಿನ ಬೊಕ್ಕಪಟ್ಣದಿಂದ ಅಳಿವೆ ಬಾಗಿಲ ವರೆಗೆ ಫಲ್ಗುಣಿ ನದಿಯಲ್ಲಿ ಅಲ್ಲಿಂದ ಜಪ್ಪಿನಮೊಗರು ಸೇತುವೆ ವರೆಗೆ ನೇತ್ರಾವತಿ ನದಿಯಲ್ಲಿ ವಿಹಾರನೌಕೆ ಸಾಗಿತು. ಕನ್ನಡ ಧ್ವಜಗಳಿಂದ ಶೃಂಗರಿಸಲ್ಪಟ್ಟಿದ್ದ ಕ್ರೂಸ್‌ನಲ್ಲಿ ಮೂಡಿ ಬಂದ ಕನ್ನಡದ ಹಾಡುಗಳಿಗೆ ಕೇಳುಗರು ತಲೆದೂಗಿದರು.

### ಎನ್‌ಐಟಿಕೆಯಲ್ಲಿ ಕೋಟಿ ಕಂಠ ಗಾಯನ

**ಮಂಗಳೂರು:** ಕನ್ನಡ ರಾಜ್ಯೋತ್ಸವದ ಅಂಗವಾಗಿ ರಾಜ್ಯ ಸರ್ಕಾರ ಹಮ್ಮಿಕೊಂಡಿರುವ ಕೋಟಿ ಕಂಠ ಗಾಯನ ಕಾರ್ಯಕ್ರಮದ ಹಿನ್ನೆಲೆಯಲ್ಲಿ ಸುರತ್ಕಲ್‌ನ ಎನ್‌ಐಟಿಕೆಯಲ್ಲೂ ಅರ್ಥಪೂರ್ಣವಾಗಿ ಕಾರ್ಯಕ್ರಮ ನಡೆಯಿತು. ಸಂಸ್ಥೆಯ ಪ್ರಾಧ್ಯಾಪಕ ಹಾಗೂ ಬೋಧಕೇತರ ಸಿಬ್ಬಂದಿಗಳು ಹಾಗೂ ವಿದ್ಯಾರ್ಥಿ, ವಿದ್ಯಾರ್ಥಿನಿಯರು, ಸಕ್ರಿಯವಾಗಿ ಭಾಗವಹಿಸಿ ಸುಶ್ರಾವ್ಯವಾಗಿ ಆರು ಗೀತೆಗಳನ್ನು ಹಾಡಿದರು. ನಾಡ ಗೀತೆ, ಉದಯವಾಗಲಿ ನಮ್ಮ ಚೆಲುವ ಕನ್ನಡನಾಡು, ಬಾರಿಸು ಕನ್ನಡ ಡಿಂಡಿಮವ, ಹಚ್ಚೇವು ಕನ್ನಡದ ದೀಪ, ವಿಶ್ವ ವಿನೂತನ ವಿದ್ಯಾ ಚೇತನ, ಹುಟ್ಟಿದರೇ ಕನ್ನಡ ನಾಡಲಿ ಹುಟ್ಟಬೇಕು ಈ ಹಾಡುಗಳನ್ನು ಹಾಡಲಾಯಿತು. ಕಾರ್ಯಕ್ರಮದಲ್ಲಿ ಪ್ರಭಾರ ನಿರ್ದೇಶಕ ಪ್ರೊ.ಪ್ರಸಾದ್ ಕೃಷ್ಣ, ರಿಜಿಸ್ಟ್ರಾರ್ ರವೀಂದ್ರನಾಥ್ ಮುಂತಾದವರು ಪಾಲ್ಗೊಂಡಿದ್ದರು.

**ತೆಂಕಿಲ ವಿವೇಕಾನಂದ ಕ್ರೀಡಾಂಗಣ:** ಕನ್ನಡ ನಾಡು ಕನ್ನಡ ನುಡಿ ಪರಂಪರೆಯನ್ನು ಉಳಿಸಿ ಬೆಳೆಸುವ ನಿಟ್ಟಿನಲ್ಲಿ ಕರ್ನಾಟಕ ಸರಕಾರದ ವತಿಯಿಂದ ಆಯೋಜಿಸಲಾದ ಕೋಟಿ ಕಂಠ ಗಾಯನ ಕಾರ್ಯಕ್ರಮ ಶುಕ್ರವಾರ ಪುತ್ತೂರು ವಿವೇಕಾನಂದ ಶಾಲಾ ಕ್ರೀಡಾಂಗಣದಲ್ಲಿ ಜರಗಿತು.

ಕಾರ್ಯಕ್ರಮಕ್ಕೆ ದೀಪ ಬೆಳಗಿ ಚಾಲನೆ ನೀಡಿದ 'ಹೊಸ ದಿಗಂತ' ಪತ್ರಿಕೆಯ ಮುಖ್ಯ ಕಾರ್ಯನಿರ್ವಹಣಾಧಿಕಾರಿ, ಸಂಪಾದಕ ಪ್ರಕಾಶ್ ಪಿ.ಎಸ್., ಕನ್ನಡ ನಾಡು ನುಡಿಗಳ ಅವಶ್ಯಕತೆಯನ್ನು ತಿಳಿಸಿ ಶುಭ ಹಾರೈಸಿದರು. ಬಳಿಕ ಜೈ ಭಾರತ ಜನನಿಯ ತನುಜಾತೆ ಉದಯವಾಗಲಿ ನಮ್ಮ ಚೆಲುವ ಕನ್ನಡ ನಾಡು, ಬಾರಿಸು ಕನ್ನಡ ಡಿಂಡಿಮವ, ಹಚ್ಚೇವು ಕನ್ನಡದ ದೀಪ, ವಿಶ್ವವಿನೂತನ ವಿದ್ಯಾ ಚೇತನ ಹಾಗೂ ಹುಟ್ಟಿದರೆ ಕನ್ನಡ ನಾಡಲ್ಲಿ ಹುಟ್ಟಬೇಕು ಎಂಬ ಕನ್ನಡ ಹಾಡುಗಳನ್ನು ವಿವೇಕಾನಂದ ಆಂಗ್ಲ ಮಾಧ್ಯಮ ಮತ್ತು ವಿವೇಕಾನಂದ ಕನ್ನಡ ಮಾಧ್ಯಮ ಶಾಲಾ ಸುಮಾರು 2,000 ವಿದ್ಯಾರ್ಥಿ ವಿದ್ಯಾರ್ಥಿನಿಯರು ಹಾಗೂ 200 ಮಂದಿ ಶಿಕ್ಷಕ ಬಂಧುಗಳು ಹಾಡಿದರು.

ಭೂಮಿ ಕನ್‌ಸ್ಟ್ರಕ್ಷನ್ ಮಾಲಕ ನವೀನ್ ಪ್ರಸಾದ್ ರೈ ಕೈಕಾರ, ಮಸ್ಕಾಂ ನಿರ್ದೇಶಕ ಕಿಶೋರ್ ಕುಮಾರ್ ಬೊಟ್ಯಾಡಿ, ವಿವೇಕಾನಂದ ಧ್ಯಾನ ಮಂದಿರ ನಿರ್ದೇಶಕಿ ಲಕ್ಷ್ಮೀ ವಿ.ಜಿ. ಭಟ್, ಯಕ್ಷಗಾನ ಕಲಾವಿದ ಭಾಸ್ಕರ ಶೆಟ್ಟಿ ವಿವೇಕಾನಂದ ಆಂಗ್ಲ ಮಾಧ್ಯಮ ಮತ್ತು ವಿವೇಕಾನಂದ ಕನ್ನಡ ಮಾಧ್ಯಮ ಶಾಲೆಗಳ ಆಡಳಿತ ಮಂಡಳಿ ಪದಾಧಿಕಾರಿಗಳು, ಸದಸ್ಯರು ಉಪಸ್ಥಿತರಿದ್ದರು.

ದಿವ್ಯರಾಣಿ ಅವರು ಸಂಕಲ್ಪ ವಿಧಿ ಬೋಧಿಸಿದರು. ವಿವೇಕಾನಂದ ಆಂಗ್ಲ ಮಾಧ್ಯಮ ಶಾಲೆಯ ಸಹ ಶಿಕ್ಷಕಿ ಯಶೋದ ಅವರು ಸ್ವಾಗತಿಸಿ, ವಿವೇಕಾನಂದ ಕನ್ನಡ ಮಾಧ್ಯಮ ಶಾಲೆಯ ಶಿಕ್ಷಕ ಚಂದ್ರಶೇಖರ್ ಅವರು ವಂದಿಸಿದರು.

Hasa Digantha. Date: 29_10_22